ಕಛೇರಿ ದೂರವಾಣಿ : +91 80 23354039
+91 80 23354085
ಇ-ಮೇಲ್: com-hfws@karnataka.gov.in

# ಆಯುಕ್ತಾಲಯ

## ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು

## ಕನ್ನಡ ಕಾಯಕ ವರ್ಷಾಚರಣೆ

ಸಂಖ್ಯೆ: NVBDCP/COVID 19 /EST 7K/2020-21 ದಿನಾಂಕ: 16.8.2021.

**ಆದೇಶ**

ವಿಷಯ: ಕೋವಿಡ್ 19 ಪ್ರಕರಣಗಳು ಹಾಗೂ ಮರಣ ಪ್ರಮಾಣ ಹೆಚ್ಚಿರುವ ಜಿಲ್ಲೆಗಳಲ್ಲಿ ಕೈಗೊಳ್ಳಬೇಕಾದ ವಿಶೇಷ ಕ್ರಮಗಳು

ಉಲ್ಲೇಖ: ದಿನಾಂಕ: 14.8.2021ರಂದು ಸನ್ಮಾನ್ಯ ಮುಖ್ಯ ಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಸೂಚಿಸಿದಂತೆ.

******

ರಾಜ್ಯದ ಪ್ರಸಕ್ತ ಕೋವಿಡ್ 19 ಪರಿಸ್ಥಿತಿಯನ್ನು ಅವಲೋಕಿಸಿ, ಸಂಭಾವ್ಯ ಮೂರನೇ ಅಲೆಯನ್ನು ಸಮರ್ಪಕವಾಗಿ ನಿರ್ವಹಿಸುವ ನಿಟ್ಟಿನಲ್ಲಿ ರಾಜ್ಯ ತಾಂತ್ರಿಕ ಸಲಹಾ ಸಮಿತಿಯ ಸಲಹೆಯಂತೆ, ಉಲ್ಲೇಖದನ್ವಯ ಈ ಕೆಳಕಂಡ ಕ್ರಮಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಲು ಆದೇಶಿಸಿದೆ.

1. ರಾಜ್ಯದಲ್ಲಿ ಕೋವಿಡ್ 19 ಪ್ರಕರಣಗಳು ಕ್ರಮೇಣವಾಗಿ ಇಳಿಕೆಯಾಗಿದ್ದರೂ ಸಹ ದಕ್ಷಿಣ ಕನ್ನಡ, ಉಡುಪಿ, ಹಾಸನ, ಮೈಸೂರು, ಕೊಡಗು , ಚಿಕ್ಕಮಗಳೂರು ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ದೈನಂದಿನ ಪಾಸಿಟಿವಿಟಿ ಪ್ರಮಾಣವು ಸರಾಸರಿ 3- 4% ವರದಿಯಾಗುತ್ತಿರುವ ಹಿನ್ನಲೆಯಲ್ಲಿ, ಸದರಿ ಜಿಲ್ಲೆಗಳಲ್ಲಿ ಸಂಪರ್ಕಿತರನ್ನು ಪತ್ತೆ ಹಚ್ಚುವುದು (1 : 20 - ಪ್ರತಿ ಖಚಿತ ಪ್ರಕರಣಕ್ಕೆ ಕನಿಷ್ಠ 20 ಪ್ರಾಥಮಿಕ ಹಾಗೂ ದ್ವಿತೀಯ ಸಂಪರ್ಕಿತರನ್ನು ಪತ್ತೆ ಮಾಡಿ ಪರೀಕ್ಷೆಗೆ ಒಳಪಡಿಸುವುದು) ಕೋವಿಡ್ 19 ಪರೀಕ್ಷೆಗಳನ್ನು ಹೆಚ್ಚಿಸುವುದು ಹಾಗೂ ಲಸಿಕೆ ನೀಡಿಕೆ ಪ್ರಮಾಣವನ್ನು ವೃದ್ಧಿಸುವ ನಿಟ್ಟನಲ್ಲಿ ದೈನಂದಿನ ಗರಿಷ್ಠ ಪ್ರಗತಿಯನ್ನು ಸಾಧಿಸುವುದು.

2. ಮುಂದುವರೆದು, ಟೆಸ್ಟ್ ಪಾಸಿಟಿವಿಟಿ ಪ್ರಮಾಣ (Test Positivity Rate- TPR) ವು ಶೇಕಡಾ 2ಕ್ಕಿಂತ ಅಧಿಕವಾಗಿರುವ ಜಿಲ್ಲೆಗಳಲ್ಲಿ, ಪ್ರತಿದಿನ ಆಸ್ಪತ್ರೆಗೆ ದಾಖಲಾಗುವವರ ಸಂಖ್ಯೆಯ ಆಧಾರದ ಮೇಲೆ ಅಗತ್ಯ ಸಂಖ್ಯೆಯ ಕೋವಿಡ್ 19 ನಾರ್ಮಲ್ ಬೆಡ್‌ಗಳು, ಆಕ್ಸಿಜನೇಟೆಡ್ ಬೆಡ್‌ಗಳು, ಐ ಸಿ ಯು ಹಾಗೂ ಪಿಡಿಯಾಟ್ರಿಕ್ ಬೆಡ್‌ಗಳ ಲಭ್ಯತೆಯನ್ನು ಖಚಿತಪಡಿಸಿಕೊಳ್ಳುವುದು.

3. ಸುತ್ತೋಲೆ ಸಂಖ್ಯೆ: HFW 242 ACS 2021 ದಿನಾಂಕ: 16.8.2021ರ ಅನ್ವಯ, ಈಗಾಗಲೇ ರಚನೆಯಾಗಿರುವ ಜಿಲ್ಲಾ ಮಟ್ಟದ Technical Expert Committeeಯು, ಆಯಾ ಜಿಲ್ಲೆಯಲ್ಲಿ ಕೋವಿಡ್ 19 ನಿಯಂತ್ರಣದ ನಿಟ್ಟಿನಲ್ಲಿ ರಾಜ್ಯ ಕೋವಿಡ್ 19 ತಾಂತ್ರಿಕ ಸಲಹಾ ಸಮಿತಿಯ (COVID-19 State Level Technical Advisory Committee) ಮಾರ್ಗದರ್ಶನವನ್ನು ಪಡೆಯುವುದು. ಅದರಂತೆ, ವಾರಕ್ಕೊಮ್ಮೆ ನಡೆಯುವ ಸಭೆಯಲ್ಲಿ, ತಪ್ಪದೇ ಭಾಗವಹಿಸಲು ಸೂಚಿಸಿದೆ.

ಒಟ್ಟಾರೆಯಾಗಿ, ಕೋವಿಡ್ 19 ನ ಸೋಂಕನ್ನು ನಿಯಂತ್ರಿಸುವ ನಿಟ್ಟಿನಲ್ಲಿ, ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಮೇಲೆ ತಿಳಿಸಿದ ಎಲ್ಲಾ ಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸೂಚಿಸಿದೆ.

ಆಯುಕ್ತರು
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು.

ರವರಿಗೆ:

1. ವಿಶೇಷ ಆಯುಕ್ತರು – ಆರೋಗ್ಯ , ಬಿ ಬಿ ಎಂ ಪಿ, ಬೆಂಗಳೂರು
2. ಜಿಲ್ಲಾಧಿಕಾರಿಗಳು, ಎಲ್ಲಾ ಜಿಲ್ಲೆಗಳು
3. ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಎಲ್ಲಾ ಜಿಲ್ಲೆಗಳು
4. ಜಿಲ್ಲಾ ಆರೋಗ್ಯಾಧಿಕಾರಿಗಳು/ ಜಿಲ್ಲಾ ಸರ್ಜನರು/ಆಡಳಿತ ವೈದ್ಯಾಧಿಕಾರಿಗಳು/ ತಾಲ್ಲೂಕು ವೈದ್ಯಾಧಿಕಾರಿಗಳು ಹಾಗೂ ಎಲ್ಲಾ ಸಾರ್ವಜನಿಕ ಆಸ್ಪತ್ರೆಗಳ ವೈದ್ಯಕೀಯ ಅಧೀಕ್ಷಕರು.
5. ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು, ಎಲ್ಲಾ ಜಿಲ್ಲೆಗಳು
6. ಮುಖ್ಯ ಆರೋಗ್ಯಾಧಿಕಾರಿಗಳು, ಬಿ ಬಿ ಎಂ ಪಿ, ಬೆಂಗಳೂರು.
7. ರಾಜ್ಯಾಧ್ಯಕ್ಷರು, ಕೆ ಪಿ ಎಂ ಈ.
8. ರಾಜ್ಯಾಧ್ಯಕ್ಷರು, ಖಾಸಗಿ ಆಸ್ಪತ್ರೆಗಳ ಒಕ್ಕೂಟ
9. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು
10. ಅಭಿಯಾನ ನಿರ್ದೇಶಕರು, ಎನ್ ಹೆಚ್ ಎಂ, ಬೆಂಗಳೂರು.
11. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
12. ನಿರ್ದೇಶಕರು, ವೈದ್ಯಕೀಯ ಶಿಕ್ಷಣ, ಬೆಂಗಳೂರು.

ಪ್ರತಿಯನ್ನು ಮಾಹಿತಿಗಾಗಿ ಸಲ್ಲಿಸಲಾಗಿದೆ:

1. ಮುಖ್ಯ ಆಯುಕ್ತರು, ಬಿ ಬಿ ಎಂ ಪಿ, ಬೆಂಗಳೂರು
2. ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
3. ಪ್ರಧಾನ ಕಾರ್ಯದರ್ಶಿಗಳು, ವೈದ್ಯಕೀಯ ಶಿಕ್ಷಣ ಇಲಾಖೆ
4. ಮಾನ್ಯ ಮಂತ್ರಿಗಳು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ, ರವರ ಆಪ್ತ ಕಾರ್ಯದರ್ಶಿಗಳು.